ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ

## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು–560003.

ಸಂಖ್ಯೆ.ಡಿ4/ಎಸ್.ಎಸ್.ಎಲ್.ಸಿ–ಅಂ.ಪ ವಿತರಣೆ–01/2020–21 ದಿನಾಂಕ: 19–12–2020

### ಸುತ್ತೋಲೆ

**ವಿಷಯ:** ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪಾಸಾದ ಅಭ್ಯರ್ಥಿಗಳ ಅಂಕಪಟ್ಟಿಯಲ್ಲಿ ಅಭ್ಯರ್ಥಿ ಹೆಸರು /ಪೋಷಕರ ಹೆಸರು ಮತ್ತು ಜನ್ಮದಿನಾಂಕ ಇತ್ಯಾದಿ ತಿದ್ದುಪಡಿ ಕುರಿತು ಶಾಲಾ ಮುಖ್ಯಶಿಕ್ಷಕರು ಅನುಸರಿಸಬೇಕಾದ ಕ್ರಮಗಳ ಕುರಿತು ಮಾರ್ಗ ಸೂಚನೆಗಳು.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 100 ಡಿಟಿಬಿ 2014 ದಿನಾಂಕ:26–10–2015
2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:02–08–2016 ಮತ್ತು 13–08–2019.

******

ಉಲ್ಲೇಖಿತ ಪತ್ರಗಳತ್ತ ಗಮನ ಸೆಳೆಯುತ್ತಾ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಎಸ್.ಎಸ್.ಎಲ್.ಸಿ. ಪಾಸಾದ ನಂತರದಲ್ಲಿ ಅಭ್ಯರ್ಥಿಗಳ ಅಂಕಪಟ್ಟಿಯಲ್ಲಿ ಅಭ್ಯರ್ಥಿಯ ಹೆಸರು, ತಂದೆ/ತಾಯಿ ಹೆಸರು ಮತ್ತು ಜನ್ಮ ದಿನಾಂಕ ಇತ್ಯಾದಿ ತಿದ್ದುಪಡಿ ಮಾಡಲಾಗುತ್ತಿರುವುದು ಸರಿಯಷ್ಟೆ. ಸರ್ಕಾರದ ಸುತ್ತೋಲೆ ಹಾಗೂ ಮಂಡಳಿಯ ಸುತ್ತೋಲೆಗಳನ್ವಯ ಶಾಲಾ ಮುಖ್ಯ ಶಿಕ್ಷಕರುಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿದ್ದುಪಡಿಗೆ ಅಗತ್ಯವಿರುವ ದಾಖಲೆಗಳನ್ನು ಪರಿಶೀಲಿಸದೆಯೇ ಮಂಡಳಿಗೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವುದು ಕಂಡುಬರುತ್ತಿದೆ. ಈ ಬಗ್ಗೆ ಸಾಕಷ್ಟು ಬಾರಿ ಸೂಚನೆಗಳನ್ನು ನೀಡಿದಾಗ್ಯೂ ಅಪೂರ್ಣ ಮಾಹಿತಿಯೊಂದಿಗೆ ಪ್ರಸ್ತಾವನೆಗಳು ಮಂಡಳಿಯಲ್ಲಿ ಸ್ವೀಕೃತವಾಗುತ್ತಿದೆ. ಇದರಿಂದಾಗಿ ಅನಗತ್ಯವಾಗಿ ಪತ್ರ ವ್ಯವಹಾರವು ಹೆಚ್ಚಾಗುತ್ತಿದೆ. ಅಲ್ಲದೆ ಶಾಲಾ ಹಂತದಲ್ಲಿ ತಿದ್ದುಪಡಿಗಾಗಿ ಬರುವ ಅಭ್ಯರ್ಥಿಗಳಿಗೆ ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡದೆ ಮಾಹಿತಿ ಕೊರತೆಯಿಂದಾಗಿ, ಅಭ್ಯರ್ಥಿಗಳು ಮಂಡಳಿಗೂ, ವ್ಯಾಸಂಗ ಮಾಡಿದ ಶಾಲೆಗಳಿಗೂ ಅಲೆದಾಡುತ್ತಿರುವುದನ್ನು ಗಮನಿಸಲಾಗಿದೆ.

ತಿದ್ದುಪಡಿಗಾಗಿ ಅನುಸರಿಸಬೇಕಾದ ವಿಧಾನಗಳನ್ನು ಮಂಡಳಿಯ ಅಂತರ್ಜಾಲದಲ್ಲಿ (Website) ಮಂಡಳಿಯಿಂದ ಪ್ರಕಟವಾಗಿರುವ "ದಿಶಾ–ಪರೀಕ್ಷಾ ಕೈಪಿಡಿ"ಯಲ್ಲಿ ಮಾಹಿತಿ ಲಭ್ಯವಿದ್ದರೂ ಸಹ ಅಭ್ಯರ್ಥಿಗಳಿಗೆ ದಾರಿ ತಪ್ಪಿಸುವ ಕೆಲಸ ಮಾಡುತ್ತಿರುವುದು ವಿಷಾದನೀಯ ಸಂಗತಿ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ:13.08.2019 ರ ಸುತ್ತೋಲೆಯಲ್ಲಿನ ಅಂಶಗಳನ್ನು ಪುನರುಚ್ಚರಿಸುತ್ತಾ, ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿ ಅಭ್ಯರ್ಥಿ ಹೆಸರು/ತಂದೆ /ತಾಯಿ ಹೆಸರು ಮತ್ತು ಜನ್ಮ ದಿನಾಂಕ ಇತ್ಯಾದಿ ತಪ್ಪುಗಳ ತಿದ್ದುಪಡಿಗಾಗಿ ಅರ್ಜಿ ಸಲ್ಲಿಸಿದಲ್ಲಿ, ಅಂತಹ ಅರ್ಜಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ವಿದ್ಯಾರ್ಥಿಯು ವ್ಯಾಸಂಗ ಮಾಡಿದ ಪ್ರಾಥಮಿಕ ಶಾಲಾ ದಾಖಲಾತಿ ವಹಿಯನ್ನು ಪರಿಶೀಲಿಸಿ, ಪ್ರಾಥಮಿಕ ಶಾಲಾ ದಾಖಲಾತಿಯಲ್ಲಿರುವಂತೆ ಪ್ರೌಢ ಶಾಲೆಯ ದಾಖಲಾತಿ ವಹಿಗಳಲ್ಲಿ ಮಾಹಿತಿಗಳನ್ನು ನಮೂದಿಸಲಾಗಿದೆಯೇ ಎಂಬ ಬಗ್ಗೆ ಖಚಿತಪಡಿಸಿಕೊಂಡು, ತಿದ್ದುಪಡಿಗೆ ಅನುಸರಿಸಬೇಕಾದ ವಿಧಾನಗಳಂತೆ ಪೂರ್ಣ ಪ್ರಸ್ತಾವನೆಯನ್ನು ಮಂಡಳಿಗೆ ಕಳುಹಿಸತಕ್ಕದ್ದು.

ಅಂಕಪಟ್ಟಿಗಳ ಬಗ್ಗೆ ಮಾಹಿತಿಯನ್ನು ಕೋರಿ ಬಂದಂತಹ ಅಭ್ಯರ್ಥಿಗಳನ್ನು ವಿನಾಕಾರಣ ಮಂಡಳಿಗೆ ನೇರವಾಗಿ ಕಳುಹಿಸದೆ ಸೂಕ್ತವಾದ ಸಲಹೆ/ಮಾರ್ಗದರ್ಶನವನ್ನು ನಿಮ್ಮ ಹಂತದಲ್ಲೇ ನೀಡುವುದು.

ಈ ಮೇಲ್ಕಂಡ ಸೂಚನೆಗಳನ್ನು ಎಲ್ಲಾ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಕಡ್ಡಾಯವಾಗಿ ಪಾಲಿಸತಕ್ಕದ್ದು. ಒಂದು ವೇಳೆ ಶಾಲಾ ಮುಖ್ಯ ಶಿಕ್ಷಕರು ಮಂಡಳಿಯ ಮಾರ್ಗಸೂಚನೆಯನ್ನು ಉಲ್ಲಂಘಿಸಿದರೆ ಅಂತಹ ಶಾಲಾ ಮುಖ್ಯ ಶಿಕ್ಷಕರು/ ಶಿಕ್ಷಕರುಗಳೇ ಮುಂದಿನ ಆಗುಹೋಗುಗಳಿಗೆ ನೇರವಾಗಿ ಜವಾಬ್ದಾರರಾಗುತ್ತಾರೆ.

ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಶಾಲೆಗಳ ಶಾಲಾ ಮುಖ್ಯ ಶಿಕ್ಷಕರುಗಳಿಗೆ ಸೂಕ್ತ ನಿರ್ದೇಶನ ನೀಡಲು ತಿಳಿಸಿದೆ.

ನಿರ್ದೇಶಕರು (ಪರೀಕ್ಷೆಗಳು)

ಇವರಿಗೆ,

1. ಬೆಂಗಳೂರು ವಿಭಾಗ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ, ಉಪನಿರ್ದೇಶಕರುಗಳಿಗೆ ಮುಂದಿನ ಕ್ರಮಕ್ಕಾಗಿ.
2. ಬೆಂಗಳೂರು ವಿಭಾಗಕ್ಕೆ ಒಳಪಟ್ಟ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರ ಮುಖಾಂತರ)
3. ಬೆಂಗಳೂರು ವಿಭಾಗದ ಎಲ್ಲಾ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)
4. ಕಛೇರಿ ಪ್ರತಿ.